<u>ಕರ್ನಾಟಕ ಸರ್ಕಾರ</u>

ಸಂಖ್ಯೆ: ಆರ್‌ಡಿ 78 ಎಲ್‌ಜಿಪಿ 2009

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:04:01:2011.

ಸುತ್ತೋಲೆ ಸಂಖ್ಯೆ: 2

<u>ಸುತ್ತೋಲೆ</u>

ವಿಷಯ: ಕರ್ನಾಟಕ ನವೀಕರಿಸಬಹುದಾದ ಇಂಧನ ನೀತಿ 2009-14ರನ್ವಯ ಸರ್ಕಾರಿ ಜಮೀನುಗಳ ಮಂಜೂರಾತಿ ಬಗ್ಗೆ.

ಉಲ್ಲೇಖ: ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್‌ಡಿ 23 ಎಲ್‌ಜಿಪಿ 2002, ದಿ:04.05.2002.

*********

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ನವೀಕರಿಸಬಹುದಾದ ಇಂಧನ ನೀತಿ 2009-14ರನ್ವಯ ನವೀಕರಿಸಬಹುದಾದ ಇಂಧನ ಯೋಜನೆಗಳಿಗೆ ಸರ್ಕಾರಿ ಜಮೀನುಗಳನ್ನು ಆದ್ಯತೆಯ ಮೇಲೆ ಮಂಜೂರು ಮಾಡಬೇಕಾಗಿರುತ್ತದೆ. ಈವರೆಗೆ ಉಲ್ಲೇಖಿತ ಸುತ್ತೋಲೆಯನ್ವಯ ಇಂತಹ ಯೋಜನೆಗಳಿಗೆ ಸರ್ಕಾರಿ ಜಮೀನುಗಳನ್ನು ಮಂಜೂರು ಮಾಡುವಾಗ ಜಮೀನನ್ನು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಗುತ್ತಿಗೆ ಆಧಾರದ ಮೇಲೆ ಮಂಜೂರು ಮಾಡಿ ಆ ಜಮೀನನ್ನು ಯೋಜನೆ ಕೈಗೊಳ್ಳುವ ಸಂಸ್ಥೆಗೆ ನಿಯಮಿತವು ಉಪ ಗುತ್ತಿಗೆಗೆ ನೀಡಲಾಗುತ್ತಿತ್ತು. ದಿ:03.11.2010ರಂದು ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಇಂಧನ ಇಲಾಖೆಯ ಕೋರಿಕೆಯಂತೆ ಇನ್ನು ಮುಂದೆ ಸರ್ಕಾರಿ ಜಮೀನುಗಳನ್ನು ಗುತ್ತಿಗೆ ಆಧಾರದ ಮೇಲೆ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಮೂಲಕ ಮಂಜೂರು ಮಾಡುವ ಬದಲಾಗಿ ನೇರವಾಗಿ ಯೋಜನೆ ಕೈಗೊಳ್ಳುವ ಸಂಸ್ಥೆಗೆ ಗುತ್ತಿಗೆ ಆಧಾರದ ಮೇಲೆ ಮಂಜೂರು ಮಾಡಲು ನಿರ್ಣಯಿಸಲಾಗಿರುತ್ತದೆ. ಆದ್ದರಿಂದ ಇನ್ನು ಮುಂದೆ ಕರ್ನಾಟಕ ನವೀಕರಿಸಬಹುದಾದ ಇಂಧನ ಯೋಜನೆಗಳಿಗೆ ಸರ್ಕಾರಿ ಜಮೀನುಗಳನ್ನು ಮಂಜೂರು ಮಾಡುವಾಗ ಯೋಜನೆ ಕೈಗೊಳ್ಳುವ ಇಂತಹ ಸಂಸ್ಥೆಗಳೊಂದಿಗೆ ಕರ್ನಾಟಕ ಭೂ ಮಂಜೂರಾತಿ ನಿಯಮಗಳು 1969ರ ನಿಯಮ 19ರನ್ವಯ ನೇರವಾಗಿ ಗುತ್ತಿಗೆ ಆಧಾರದ ಮೇಲೆ ಮಂಜೂರು ಮಾಡಲು ಪ್ರಸ್ತಾವನೆಗಳನ್ನು ಸಲ್ಲಿಸುವಂತೆ ಸೂಚಿಸಲಾಗಿದೆ. ಈ ರೀತಿ ಗುತ್ತಿಗೆ ಆಧಾರದ ಮೇಲೆ ನೀಡುವಾಗ ಗುತ್ತಿಗೆಗೆ ನೀಡುವ ಜಮೀನಿನ ವಿಸ್ತೀರ್ಣವು ಸೋಲಾರ್ ಪವರ್ ಜನರೇಟರ್ ಯಂತ್ರಗಳ foot-printನ ವಿಸ್ತೀರ್ಣಕ್ಕೆ ಮತ್ತು ಪವರ್ ಜನರೇಟರ್ ಸ್ಟೇಷನ್‌ಗೆ ಅಗತ್ಯವಿರುವ ವಿಸ್ತೀರ್ಣಕ್ಕೆ ಸೀಮಿತಗೊಳಿಸತಕ್ಕದ್ದು.

(ವಿ. ಮಧು)
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಕಂದಾಯ ಇಲಾಖೆ.

ಇವರಿಗೆ,

1. ಪ್ರಾದೇಶಿಕ ಆಯುಕ್ತರು, ಬೆಂಗಳೂರು / ಬೆಳಗಾಂ / ಗುಲ್ಬರ್ಗಾ / ಮೈಸೂರು ವಿಭಾಗ.
2. ಎಲ್ಲಾ ಜಿಲ್ಲಾಧಿಕಾರಿಗಳು.
3. ಎಲ್ಲಾ ಉಪ ವಿಭಾಗಾಧಿಕಾರಿಗಳು. } ಜಿಲ್ಲಾಧಿಕಾರಿಗಳ ಮೂಲಕ.
4. ಎಲ್ಲಾ ತಹಶೀಲ್ದಾರರುಗಳು. } ಜಿಲ್ಲಾಧಿಕಾರಿಗಳ ಮೂಲಕ.
5. ಶಾಖೆಯ ರಕ್ಷಾ ಕಡತ.
6. ಹೆಚ್ಚುವರಿ ಪ್ರತಿಗಳು.